ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.

## ಸಿ.ಸಿ.ನಂ.3857/2023

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಶೇಖರಪ್ಪ** | | |
| **ತಂದೆ:ಹೆಸರು** | **ಮುದುಕಪ್ಪ** | **ಪಿಡಬ್ಲೂ:** | **2** |
| **ವಯಸ್ಸು** | **45 ವರ್ಷ** | **ಸಿಡಬ್ಲೂ:** | **2** |
| **ಉದ್ಯೋಗ:** | **ಪೇಂಟರ್** | | |
| **ವಾಸ ಸ್ಥಳ:** | **ಸಿಂಧನೂರು** | | |

ದಿನಾಂಕ **16-04-2026** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ::**

ಸಾಕ್ಷಿಗೆ ನಿಪಿ-1 ಜಪ್ತಿ ಪಂಚನಾಮೆಯನ್ನು ತೋರಿಸಲಾಗಿ, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1 ಬಿ ಗುರುತಿಸಲಾಯಿತು. ಮು. ಮಾ. ಗಳ ಮೇಲೆ ಅಂಟಿಸಿದ ಚೀಟಿಯ ಮೇಲೆ ಇರುವ ಸಹಿಯನ್ನು ನೋಡಿ ಸಾಕ್ಷಿ ಗುರುತಿಸಿರುತ್ತಾರೆ. ಆದರೆ ಯಾವ ಕಾರಣಕ್ಕಾಗಿ ಸಹಿ ಪಡೆದಿದ್ದರು ಎಂದು ನನಗೆ ಗೊತ್ತಿಲ್ಲ.

ನಾನು ಠಾಣೆಗೆ ಬೇರೆ ಕೆಲಸಕ್ಕೆಂದು ಹೋದಾಗ ಸಹಿ ಮಾಡಿದ್ದೆ. ನಿಪಿ-1 ಕ್ಕೆ ಸಹಿಯನ್ನು ಏತಕ್ಕಾಗಿ ಮಾಡಿದೆ ಎಂಬುದು ನನಗೆ ಗೊತ್ತಿಲ್ಲ. ನಿಪಿ-1 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ.

ಈ ಪ್ರಕರಣದ ಬಗ್ಗೆ & ಆರೋಪಿಯ ಬಗ್ಗೆ ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ ಸ ಅ ರವರಿಂದಃ**

ದಿನಾಂಕಃ08-09-2020 ರಂದು ಸಂ.5 ರಿಂದ 6 ಗಂಟೆಗೆ ಚಾಸಾ-1 ರವರು ನನ್ನನ್ನು ಮತ್ತು ಚಾಸಾ-3 ರವರ ಸಮಕ್ಷಮ ಸಿಂಧನೂರು ನಗರದ ರಾಯಚೂರು ರಸ್ತೆಯ ಡಾಲರ್ಸ್ ಕಾಲೋನಿಯ ಗೇಟಿನ ಮುಂದೆ ಸಾರ್ವಜನಿಕ ಸ್ಥಳದಲ್ಲಿ ಆರೋಪಿತನು ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾಗ, ನಮ್ಮ ಸಮಕ್ಷಮ ಆತನ ಮೇಲೆ ದಾಳಿ ಮಾಡಿ, ಆರೋಪಿ & ಆತನ ವಶದಿಂದ ನಿಪಿ-1 ರಲ್ಲಿ ತೋರಿಸಿದ & ನ್ಯಾಯಾಲಯದ ಮುಂದಿರುವ ಮು.ಮಾ. ನ್ನು ಜಪ್ತುಪಡಿಸಿಕೊಂಡಿದ್ದು, ಪ್ರತ್ಯೇಕವಾಗಿ ರಾಸಾಯನಿಕ ಪರೀಕ್ಷೆಗಾಗಿ ಜಪ್ತು ಎಂದರೆ ಸರಿಯಲ್ಲ.

ನಿಪಿ-1 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ., ಸಿಂಧನೂರು.**